18.7
16

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಸಿ.ಟಿ. ರವಿ, ಇವರು ದಿನಾಂಕ: 18-07-2024ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನಾ ಪತ್ರಕ್ಕೆ ಸರ್ಕಾರದ ಹೇಳಿಕೆ.**

**ವಿಷಯ:-**

"ಪ್ರಾಥಮಿಕ ಶಿಕ್ಷಣದಲ್ಲಿ ಮಕ್ಕಳ ಹಕ್ಕು ಕಾಯ್ದೆ-2009 ಹಾಗೂ ಎನ್.ಸಿ.ಟಿ.ಇ ಅಧಿಸೂಚನೆ ಅನ್ವಯ 2017 ರಲ್ಲಿ ಹೊಸ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸಿದ್ದು, ಅದರ ಪ್ರಕಾರ ಮೊದಲಿದ್ದ 1-8 ರ ವೃಂದವನ್ನು 1-5 ಮತ್ತು 6-8 ಎಂಬ ಎರಡು ವೃಂದಗಳಲ್ಲಿ ವಿಭಾಗಿಸಿ ವಿವಿಧ ವಿದ್ಯಾರ್ಹತೆಗಳನ್ನು ನಿಗದಿಪಡಿಸಲಾಗಿದೆ. ಇದು ಉತ್ತಮ ಬೆಳವಣಿಗೆಯಾದರೂ ಈ ನಿಯಮಗಳನ್ನು ಪೂರ್ವಾನ್ವಯವಾಗುವಂತೆ ಜಾರಿಗೊಳಿಸಿದ್ದರಿಂದ ರಾಜ್ಯದ ಲಕ್ಷಾಂತರ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಬಹುದೊಡ್ಡ ಅನ್ಯಾಯವಾಗಿರುವುದರ ಜೊತೆಗೆ ಕೆಲವು ಸಮಸ್ಯೆಗಳು ಉದ್ಭವವಾಗಿದೆ. ಮುಖ್ಯವಾಗಿ 2016 ಕ್ಕಿಂತ ಮುಂಚೆ 1 ರಿಂದ 7-8ನೇ ತರಗತಿಗೆ ಸಹ ಶಿಕ್ಷಕರೆಂದು ನೇಮಕಾತಿ ಹೊಂದಿದ ಶಿಕ್ಷಕರಿಗೆ P.S.T ಎಂದು ಪದನಾಮಿಕರಣ ಮಾಡಿ 1-5 ಕ್ಕೆ ಹಿಂಬಡ್ತಿ ನೀಡಲಾಗಿದೆ. ಅಲ್ಲದೆ, ಸದರಿ ವೃಂದ ಮತ್ತು ನೇಮಕಾತಿ ನಿಯಮಗಳ ಜಾರಿಯಿಂದಾಗಿ ಶಿಕ್ಷಕರಿಗೆ ಸೇವಾಜೇಷ್ಠತೆ, ಕಾಲಮಿತಿ ಬಡ್ತಿ, ಸ್ವಯಂಚಾಲಿತ ಬಡ್ತಿ, ಮುಖ್ಯ ಶಿಕ್ಷಕರ ಬಡ್ತಿ, ಪ್ರೌಢಶಾಲಾ ಶಿಕ್ಷಕರ ಬಡ್ತಿ ಹಾಗೂ ವರ್ಗಾವಣೆಗಳಲ್ಲಿ ಅನ್ಯಾಯವಾಗುವುದರ ಜೊತೆಗೆ ನಿಯಮಗಳ ಉಲ್ಲಂಘನೆಯಾಗುತ್ತಿದೆ. ಆದ್ದರಿಂದ ಸರ್ಕಾರ, ಕೂಡಲೆ ಪ್ರಾಥಮಿಕ ಶಾಲಾ ಶಿಕ್ಷಕರಿಗಾದ ಅನ್ಯಾಯವನ್ನು ಗಂಭೀರವಾಗಿ ಪರಿಗಣಿಸಿ ತುರ್ತಾಗಿ ಆದೇಶ ಹೊರಡಿಸಿ, ಉಲ್ಲಂಘನೆಯಾಗಿರುವ ನಿಯಮಗಳನ್ನು ಸರಿಪಡಿಸಲು ಕ್ರಮ ಕೈಗೊಳ್ಳಬೇಕು ಮತ್ತು ಸದರಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಮತ್ತೊಮ್ಮೆ ಪರಿಶೀಲಿಸಿ, ನಂತರ ಸೇವಾನುಭವ ಮತ್ತು ಉನ್ನತ ವಿದ್ಯಾರ್ಹತೆ ಹೊಂದಿರುವ ಸೇವಾನಿರತ ಶಿಕ್ಷಕರಿಗೆ ಯಾವುದೇ ರೀತಿಯ ತಾರತಮ್ಯ ಹಾಗೂ ಅನ್ಯಾಯವಾಗದಂತೆ ನಿಯಮ ರೂಪಿಸಿ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಬೇಕು. ಹಿಂಬಡ್ತಿಗೊಳಗಾದ ಶಿಕ್ಷಕರನ್ನು G.P.T ಶಿಕ್ಷಕರೆಂದು ಸೇವಾ ಜೇಷ್ಠತೆಯೊಂದಿಗೆ ಪದನಾಮಿಕರಣ ಮಾಡುವುದರಿಂದ ನಿಯಮ ಪಾಲನೆಯ ಜೊತೆಗೆ ಶಿಕ್ಷಕರ ವರ್ಗಾವಣೆ ಸಮಸ್ಯೆ, ಮುಖ್ಯ ಶಿಕ್ಷಕರ ಬಡ್ತಿ ಸಮಸ್ಯೆ, ಪ್ರೌಢಶಾಲಾ ಶಿಕ್ಷಕರ ಬಡ್ತಿ ಸಮಸ್ಯೆ, P.S.T ಮತ್ತು G.P.T ಹುದ್ದೆಗಳ ಸಮನ್ವಯದ ಸಮಸ್ಯೆ, ಕಾಲಮಿತಿ ಬಡ್ತಿಗಳ ಸಮಸ್ಯೆ ಹಾಗೂ ಸೇವಾ ಜೇಷ್ಠತೆಯಂತಹ ಸಮಸ್ಯೆಗಳಿಗೆ ಪರಿಹಾರ ದೊರಕುತ್ತದೆ. ಸರ್ಕಾರ ಈ ನಿಟ್ಟಿನಲ್ಲಿ ತುರ್ತು ಕ್ರಮಗಳನ್ನು ಕೈಗೊಳ್ಳಬೇಕೆಂದು ಆಗ್ರಹಿಸುತ್ತೇನೆ.

ಈ ವಿಷಯವನ್ನು ಈ ದಿನ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲು ಅವಕಾಶ ನೀಡಬೇಕೆಂದು ಕೋರುತ್ತೇನೆ".

**ಉತ್ತರ:-**

**ಪ್ರಾಥಮಿಕ ಶಾಲಾ ಶಿಕ್ಷಕರಿಂದ (ಪಿ.ಎಸ್.ಟಿ.) ಜಿ.ಪಿಟಿ ಶಿಕ್ಷಕರಾಗಿ ಬಡ್ತಿ ನೀಡುವುದಕ್ಕೆ ಸಂಬಂಧಿಸಿದಂತೆ:**

1. ರಾಷ್ಟ್ರೀಯ ಶಿಕ್ಷಕರ ಶಿಕ್ಷಣ ಪರಿಷತ್ (NCTE) ದಿನಾಂಕ:23.08.2010, 29.07.2011 ಮತ್ತು 12.11.2014ರ ಅಧಿಸೂಚನೆಗಳ ಪ್ರಕಾರ 1 ರಿಂದ 5 ನೇ ತರಗತಿ ಹಾಗೂ 6 ರಿಂದ 8 ನೇ ತರಗತಿಗಳಿಗೆ ನೇಮಿಸಬೇಕಾದ ಶಿಕ್ಷಕರ ವಿದ್ಯಾರ್ಹತೆಯನ್ನು ನಿಗದಿಪಡಿಸಿದೆ.
2. ಉಚಿತ ಕಡ್ಡಾಯ ಶಿಕ್ಷಣ ಕಾಯಿದೆ ಅನುಸಾರ 6 ರಿಂದ 8ನೇ ತರಗತಿಗಳಿಗೆ ಭಾಷೆ, ಗಣಿತ ವಿಜ್ಞಾನ ಮತ್ತು ಸಮಾಜ ಪಾಠಗಳಿಗೆ ಕನಿಷ್ಟ ಒಬ್ಬರು ಶಿಕ್ಷಕರನ್ನು ಕಡ್ಡಾಯವಾಗಿ ಲಭ್ಯಪಡಿಸಬೇಕಾಗಿದೆ.

..2

3. ಪದವೀಧರ ಪ್ರಾಥಮಿಕ ಶಿಕ್ಷಕರು (6 ರಿಂದ 8 ನೇ ತರಗತಿ) ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯು 1 ರಿಂದ 5ನೇ ತರಗತಿ ಶಿಕ್ಷಕರುಗಳಿಗೆ ನಿಗದಿಪಡಿಸಿರುವ ವಿದ್ಯಾರ್ಹತೆಗಿಂತ ಉನ್ನತ ಮಟ್ಟದಾಗಿರುತ್ತದೆ ಎಂಬ ಕಾರಣದಿಂದ 2015 & 2016ನೇ ಸಾಲಿನಲ್ಲಿ ಪದವೀಧರ ಪ್ರಾಥಮಿಕ ಶಿಕ್ಷಕರು, ಸಹ ಶಿಕ್ಷಕರು/ಶಿಕ್ಷಕಿಯರು ಎಂಬುದಾಗಿ ಹೊಸ ವೃಂದವನ್ನು ಸೃಜಿಸಲಾಗಿದೆ.
4. ಸರ್ಕಾರದ ಆದೇಶ ಸಂಖ್ಯೆ: ಇಡಿ 626 ಪಿಬಿಎಸ್ 2014, ದಿನಾಂಕ:19.05.2017ರ ಪ್ರಕಾರ ವೃಂದ ಬಲ ಆದೇಶದಲ್ಲಿ "ಪ್ರಾಥಮಿಕ ಶಾಲಾ ಶಿಕ್ಷಕರು" (1 ರಿಂದ 5ನೇ ತರಗತಿ) ಹಾಗೂ "ಪದವೀಧರ ಪ್ರಾಥಮಿಕ ಶಿಕ್ಷಕರು" (6 ರಿಂದ 8ನೇ ತರಗತಿ) ಎಂಬುದಾಗಿ ವರ್ಗೀಕರಿಸಲಾಗಿದೆ.
5. "ಪ್ರಾಥಮಿಕ ಶಾಲಾ ಪದವೀಧರ ಸಹ ಶಿಕ್ಷಕರು/ಶಿಕ್ಷಕಿಯರು" ವೃಂದವನ್ನು ಹೊಸ " ಪದವೀಧರ ಪ್ರಾಥಮಿಕ ಶಿಕ್ಷಕರು (6 ರಿಂದ 8ನೇ ತರಗತಿಗಳ)" ವೃಂದದಲ್ಲಿ ವಿಲೀನಗೊಳಿಸಲಾಗುವುದು ಎಂಬುದಾಗಿದೆ.
6. ತದನಂತರ Karnataka Education Department Service (Department of Public Instrution) (Recruitment) (Amendment) Rules, 2017'ರನ್ವಯ ಸರ್ಕಾರಿ ಪ್ರಾಥಮಿಕ ಶಾಲೆಗಳ 1 ರಿಂದ 5ನೇ ತರಗತಿ ಹಾಗೂ ಪದವೀಧರ ಪ್ರಾಥಮಿಕ ಶಿಕ್ಷಕರು (6 ರಿಂದ 8 ನೇ ತರಗತಿ) ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 626 ಪಿಬಿಎಸ್ 2014, ದಿನಾಂಕ 17.08.2017 ರಿಂದ ಜಾರಿಗೆ ಬಂದಿದೆ.
7. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 626 ಪಿಬಿಎಸ್ 2014, ದಿನಾಂಕ:17.08.2017 ರನ್ವಯ ಶೇ 75:25 ರಂತೆ ನೇರ ನೇಮಕಾತಿ ಮತ್ತು ಬಡ್ತಿಗೆ (ಡಿ. ಆರ್. / ಪಿ.ಆರ್ ) ಅವಕಾಶವಿರುತ್ತದೆ.
8. ಈ ಮೇಲಿನ ಸರ್ಕಾರದ ಅಧಿಸೂಚನೆ ಪ್ರಕಾರ ಪ್ರಾಥಮಿಕ ಶಾಲಾ ಶಿಕ್ಷಕರು ( 1 ರಿಂದ 5ನೇ ತರಗತಿ) ವೃಂದದಿಂದ ಪದವೀಧರ ಪ್ರಾಥಮಿಕ ಶಿಕ್ಷಕರು ( 6 ರಿಂದ 8ನೇ ತರಗತಿ) ವೃಂದಕ್ಕೆ ಸೇವಾ ನಿರತರ ಕೋಟಾದಡಿ ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಬಡ್ತಿ ಹೊಂದಲು ಅವಕಾಶವಿರುತ್ತದೆ.
9. ತದನಂತರ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 94 ಪಿಬಿಎಸ್ 2018 (ಭಾ-3), ದಿನಾಂಕ:10.12.2021 ರನ್ವಯ ಶೇ 67:33 ರಂತೆ ನೇರ ನೇಮಕಾತಿ ಮತ್ತು ಬಡ್ತಿಗೆ ಅವಕಾಶ ಕಲ್ಪಿಸಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಲಾಗಿದೆ.
10. ಆದರೆ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘವು ಸೇವಾ ನಿರತ (ಪಿ.ಆರ್.) ಕೋಟಾದಡಿ ಪರೀಕ್ಷೆ ಮೂಲಕ ಬಡ್ತಿ ಹೊಂದಬೇಕೆಂಬ ಷರತ್ತನ್ನು ಪರಿಷ್ಕರಿಸಿ ಸೇವಾ ಜೇಷ್ಠತೆ ಮೂಲಕ ಬಡ್ತಿಗೆ ಅವಕಾಶ ಕಲ್ಪಿಸಲು ಕೋರಿಕೆ ಸಲ್ಲಿಸಿ ಸೇವಾ ನಿರತ ಕೋಟಾದಡಿ ಬಡ್ತಿ ಅವಕಾಶವನ್ನು ಬಳಕೆ ಮಾಡಿಕೊಂಡಿರುವುದಿಲ್ಲ.
11. ಸೇವಾ ನಿರತ ಕೋಟಾದಡಿ ಪರೀಕ್ಷೆ ಮೂಲಕ ಬಡ್ತಿ ಹೊಂದಬೇಕೆಂಬ ಷರತ್ತನ್ನು ಪರಿಷ್ಕರಿಸಿ ಸೇವಾ ಜೇಷ್ಠತೆ ಮೂಲಕ ಬಡ್ತಿಗೆ ಅವಕಾಶ ಕಲ್ಪಿಸಲು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.
12. ಸಾಮಾನ್ಯವಾಗಿ ಒಂದು ಹುದ್ದೆಯಿಂದ ಮತ್ತೊಂದು ಉನ್ನತ ಶ್ರೇಣಿಯ ಹುದ್ದೆಗೆ ಬಡ್ತಿ ನೀಡಲಾದ ಸಂದರ್ಭದಲ್ಲಿ ಬಡ್ತಿ ಹೊಂದಿದ ನೌಕರರಿಗೆ ಬಡ್ತಿ ಪಡೆದ ಹುದ್ದೆಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಮಾತ್ರ ಕೆ.ಸಿ.ಎಸ್ಆರ್ 42(ಬಿ) ರನ್ವಯ ಆರ್ಥಿಕ ಸೌಲಭ್ಯಗಳನ್ನು ನೀಡಲು ಮತ್ತು ಬಡ್ತಿ ಹೊಂದಿದ ದಿನಾಂಕದಿಂದ ಮಾತ್ರ ಸೇವಾ ಜೇಷ್ಠತೆಯನ್ನು ಪರಿಗಣಿಸಲು ಅವಕಾಶವಿರುತ್ತದೆ.

13. 2017ರ ಪ್ರಾಥಮಿಕ ಶಾಲಾ ಸಹ ಶಿಕ್ಷಕ ವೃಂದದ C & R ನಲ್ಲಿ 2016 ಕ್ಕಿಂತ ಮೊದಲು ನೇಮಕಾತಿಯಾದ 1 ರಿಂದ 7, 1 ರಿಂದ 8ರ ಪ್ರಾಥಮಿಕ ಶಾಲಾ ಶಿಕ್ಷಕರನ್ನು ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರು, 6 ರಿಂದ 8 ಎಂದು ಪದನಾಮೀಕರಿಸಿ ಸೇವಾ ಜೇಷ್ಠತೆಯೊಂದಿಗೆ ವಿಲೀನಗೊಳಿಸಲು ಕರ್ನಾಟಕ ಸರ್ಕಾರಿ ಸೇವಾ ನಿಯಮಗಳ ಪ್ರಕಾರ ಮತ್ತು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶವಿರುವುದಿಲ್ಲ.
14. ಹಿಂದಿನ ಸೇವೆಯನ್ನು ಸಂರಕ್ಷಿಸಿ 6 ರಿಂದ 8ಕ್ಕೆ ಜೇಷ್ಠತೆಯೊಂದಿಗೆ ನಿಯುಕ್ತಿಗೊಳಿಸಿ ವಿಶೇಷ ಪ್ರಕರಣವೆಂದು ಪರಿಗಣಿಸಲು ಚಾಲ್ತಿ ಸೇವಾ ನಿಯಮಗಳ ಪ್ರಕಾರ ಅವಕಾಶವಿರುವುದಿಲ್ಲ.
15. 2017ರ ನಂತರ ಪದವೀಧರ ಪ್ರಾಥಮಿಕ ಶಿಕ್ಷಕರ ನೇರ ನೇಮಕಾತಿ ( ಡಿ. ಆರ್) ವಿವರ ಕೆಳಗಿನಂತಿವೆ:-

| | |
|---|---|
| 2017-2018 | 3389 |
| 2019-2020 | 1994 |
| 2022-23 | 11494 |
| **ಒಟ್ಟು-** | **16877** |

16. ಈ ರೀತಿ ಒಟ್ಟು 16877 ಪದವೀಧರ ಪ್ರಾಥಮಿಕ ಶಿಕ್ಷಕರ ಸೇವಾ ಹಿರಿತನವನ್ನು ಕಡೆಗಣಿಸಿದ್ದಲ್ಲಿ, ಸೇವಾ ಹಿರಿತನವನ್ನು ಪರಿಗಣಿಸುವಂತೆ ನೇರ ನೇಮಕಾತಿ ಹೊಂದಿರುವ ಶಿಕ್ಷಕರು ನ್ಯಾಯಾಲಯದ ಮೊರೆ ಹೋಗಬಹುದಾದ ಸಾಧ್ಯತೆಗಳಿವೆ. ಇದು ಮತ್ತೊಂದು ವೃಂದದ ತೀವ್ರ ಆಕ್ಷೇಪಣೆಗೆ ಒಳಗಾಗಲಿದೆ ಮತ್ತು ಸೇವಾ ನಿಯಮಗಳಿಗೆ ವಿರುದ್ಧವಾಗಿದೆ.
17. ಪ್ರಾಥಮಿಕ ಶಾಲಾ ಶಿಕ್ಷಕರ ಈ ವಿಭಿನ್ನ ಕೋರಿಕೆಯನ್ನು ಪರಿಗಣಿಸಿದ್ದಲ್ಲಿ ಇದು ಪೂರ್ವನಿದರ್ಶನ ಪ್ರಕರಣವಾಗಲಿದ್ದು, ಈ ಮಾದರಿಯನ್ನು ಇತರೆ ಇಲಾಖೆಗಳ ಇತರೆ ವೃಂದಗಳು ಕೋರಿಕೆ ಸಲ್ಲಿಸುವ ಸಾಧ್ಯತೆಗಳಿವೆ.

**ಪ್ರೌಢಶಾಲಾ ಶಿಕ್ಷಕರಾಗಿ ಬಡ್ತಿ ನೀಡುವುದಕ್ಕೆ ಸಂಬಂಧಿಸಿದಂತೆ:**

ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಗೆ ಬಡ್ತಿಗೆ ಸಂಬಂಧಿಸಿದಂತೆ 2016ರ ವೃಂದ ಮತ್ತು ನೇಮಕಾತಿ ನಿಯಮಗಳು ಚಾಲ್ತಿಯಲ್ಲಿದ್ದು, ಅದರಲ್ಲಿ ಪಿ.ಎಸ್.ಟಿ ವೃಂದಕ್ಕೆ ಅರ್ಹತೆ ಮತ್ತು ಜೇಷ್ಠತೆ ಹೊಂದಿರುವ ಶಿಕ್ಷಕರಿಗೆ ಬಡ್ತಿ ನೀಡಲು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. ಆದರೆ, ಜಿ.ಪಿ.ಟಿ ಶಿಕ್ಷಕರ ಬಡ್ತಿಗೆ ಸಂಬಂಧಿಸಿದಂತೆ ಯಾವುದೇ ಮಾನದಂಡಗಳು ನಿಗದಿಯಾಗಿರುವುದಿಲ್ಲ. ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 6 ರಿಂದ 8ನೇ ತರಗತಿ ಪದವೀಧರ ಶಿಕ್ಷಕರಿಗೆ ಪ್ರೌಢಶಾಲಾ ಸಹ ಶಿಕ್ಷಕರು ಗ್ರೇಡ್-2 ಹುದ್ದೆಗೆ ಬಡ್ತಿ ನೀಡುವ ಕುರಿತು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ:3443-3503/2020 ಮತ್ತು 857-917/2021 ಗಳಲ್ಲಿ ಶ್ರೀ ನಾರಾಯಣ ಬಾಳಪ್ಪ ಮತ್ತಿತರರು ದಾಖಲಿಸಿದ್ದ ದಾವೆಗೆ ಸಂಬಂಧಿಸಿದಂತೆ ಮಾನ್ಯ ನ್ಯಾಯಾಲಯವು ದಿನಾಂಕ: 12.05.2021 ರಂದು ತೀರ್ಪು ನೀಡಿದ್ದು, ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಶಿಕ್ಷಕರ ಹುದ್ದೆಗೆ ನೀಡಿರುವ ಬಡ್ತಿಗಳನ್ನು ಹಿಂಪಡೆಯಲು ಸೂಚಿಸಿರುತ್ತದೆ. ಆದ್ದರಿಂದ ಕೆ.ಎ.ಟಿ. ಅರ್ಜಿ ಸಂಖ್ಯೆ: 3343-3503/2020 ರಲ್ಲಿ ದಿನಾಂಕ:12.05.2021ರ ತೀರ್ಪು ಆದ ನಂತರ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಸಹಶಿಕ್ಷಕರ ಹುದ್ದೆಗೆ ಬಡ್ತಿ ನೀಡುವುದನ್ನು ತಡೆಹಿಡಿಯಲು ಸೂಚಿಸಲಾಗಿದೆ.

ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ:3443-3503/2020 ಮತ್ತು 857-917/2021ಗಳ ತೀರ್ಪನ್ನು ಪ್ರಶ್ನಿಸಿ ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು, ಇಲ್ಲಿ ರಿಟ್ ಪಿಟಿಷನ್ ಸಂಖ್ಯೆ: 16936/2021 ರಲ್ಲಿ ಮೇಲ್ಮನವಿ ಸಲ್ಲಿಸಿದ್ದು ಸದರಿ ಪ್ರಕರಣದಲ್ಲಿ ದಿನಾಂಕ: 11.07.2024 ರಂದು ಮಾನ್ಯ ನ್ಯಾಯಾಲಯದಲ್ಲಿ ವಿಚಾರಣೆ ನಡೆದಿದ್ದು ಸದರಿ ವಿಚಾರಣೆಯಲ್ಲಿ ಮಾನ್ಯ ನ್ಯಾಯಾಧೀಶರು ಎರಡು ವಾರದೊಳಗಾಗಿ 2016ರ ವೃಂದ ಮತ್ತು ನೇಮಕಾತಿ ನಿಯಮದ ಕರಡನ್ನು ಪ್ರಕಟಿಸಿ, ಪ್ರತಿಯನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಲು ತಿಳಿಸಿರುವ ಮೇರೆಗೆ ಅದರಂತೆ ಪರಿಷ್ಕೃತ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಧಿಸೂಚನೆ ಹೊರಡಿಸುವ ಸಂಬಂಧ ಪರಿಶೀಲನೆಯಲ್ಲಿದೆ.

2016ರ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆ ನಂತರ ಹಾಗೂ ಮಾನ್ಯ ನ್ಯಾಯಾಲಯದ ಅಂತಿಮ ಆದೇಶದ ನಂತರ ಪಿ.ಎಸ್.ಟಿ ಮತ್ತು ಜಿ.ಪಿ.ಟಿ ಶಿಕ್ಷಕರಿಗೆ ನಿಯಮಾನುಸಾರ ಬಡ್ತಿ ನೀಡುವ ಸಂಬಂಧ ಕ್ರಮವಹಿಸಲಾಗುವುದು.

**ಸಂಖ್ಯೆ: ಇಪಿ 67 ಪಿಎಂಎ 2024**

**(ಎಸ್. ಮಧುಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು